**All India Radio: Bangalore**
**National Bulletin In Kannada**
**12.02.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.02.2026 07.35 a.m.**

**<><><><>**

ಮುಖ್ಯಾಂಶಗಳು

1. ದೇಶದಲ್ಲಿ ಬಲಿಷ್ಠ ಮೂಲಸೌಕರ್ಯ ನಿರ್ಮಿಸಲು ಕೇಂದ್ರ ಸರ್ಕಾರದಿಂದ ವಿಶೇಷ ಒತ್ತು - ಕೇಂದ್ರ ಹಣಕಾಸು ಸಚಿವೆ ನಿರ್ಮಲ ಸೀತಾರಾಮನ್
2. ಲೋಕಸಭಾ ಸ್ಪೀಕರ್ ಓಂ ಬಿರ್ಲಾ ವಿರುದ್ಧದ ಅವಿಶ್ವಾಸ ಗೊತ್ತುವಳಿ ಸೂಚನೆ ಬಜೆಟ್ ಅಧಿವೇಶನದ ಎರಡನೇ ಹಂತದಲ್ಲಿ ಪರಿಗಣಿಸಲು ನಿರ್ಧಾರ
3. ಇಂದು ಬಾಂಗ್ಲಾದೇಶದಲ್ಲಿ ರಾಷ್ಟ್ರೀಯ ಸಂಸದೀಯ ಚುನಾವಣೆ ; ಸಂಜೆ ೪.೩೦ರವರೆಗೆ ಮತದಾನಕ್ಕೆ ಅವಕಾಶ
4. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಸಿ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ ವೆಸ್ಟ್ ಇಂಡೀಸ್‌ಗೆ ೩೦ ರನ್‌ಗಳ ಜಯ

<><><><>

ದೇಶದಲ್ಲಿ ಬಲಿಷ್ಠ ಮೂಲಸೌಕರ್ಯಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರವು ಪ್ರಮುಖ ಒತ್ತು ನೀಡುತ್ತಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಲೋಕಸಭೆಯಲ್ಲಿ ನಿನ್ನೆ ಸಂಜೆ ಕೇಂದ್ರ ಬಜೆಟ್ ಮೇಲಿನ ಚರ್ಚೆಗೆ ಉತ್ತರಿಸಿದ ಸಚಿವರು, ಈ ವರ್ಷದ ಬಜೆಟ್‌ನಲ್ಲಿ ಸಾರ್ವಜನಿಕ ಬಂಡವಾಳ ವೆಚ್ಚಕ್ಕಾಗಿ ೧೨ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಹಣವನ್ನು ಒದಗಿಸಲಾಗಿದೆ. ಇದು ಜಿಡಿಪಿಯ ಶೇಕಡಾ ೩.೧ ಮತ್ತು ೨೦೨೫-೨೬ ರ ಪರಿಷ್ಕೃತ ಅಂದಾಜುಗಳಿಗಿಂತ ಶೇಕಡಾ ೧೧.೫ ರಷ್ಟು ಹೆಚ್ಚಾಗಿದೆ. ದೇಶದ ಮೂಲಸೌಕರ್ಯವನ್ನು ಬಲಪಡಿಸಲು ಹಣವನ್ನು ಖರ್ಚು ಮಾಡಲಾಗುವುದು ಎಂದು ಅವರು ತಿಳಿಸಿದರು.

**ಧ್ವನಿ : ನಿರ್ಮಲ ಸೀತಾರಾಮನ್ (೨೩ ಸೆಕೆಂಡ್‌ಗಳು)**

ಬಜೆಟ್ ಉದ್ಯೋಗ ಸೃಷ್ಟಿಯ ಬಗ್ಗೆ ಮೌನವಾಗಿದೆ ಎಂಬ ವಿರೋಧ ಪಕ್ಷದ ಆರೋಪಗಳನ್ನು ನಿರಾಕರಿಸಿದ ಹಣಕಾಸು ಸಚಿವರು, ದೇಶದಲ್ಲಿ ಐದು ಪ್ರಾದೇಶಿಕ ವೈದ್ಯಕೀಯ ಕೇಂದ್ರಗಳು ವೈದ್ಯಕೀಯ ಪ್ರವಾಸೋದ್ಯಮವನ್ನು ಉತ್ತೇಜಿಸಲಿವೆ. ಮುಂಬರುವ ವರ್ಷಗಳಲ್ಲಿ ಆನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್ ಮತ್ತು ಕಾಮಿಕ್ಸ್ ವಲಯವು ದೇಶದಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಲಿದೆ ಎಂದು ಅವರು ಹೇಳಿದರು. ರಾಜ್ಯಗಳಿಗೆ ತೆರಿಗೆ ಹಂಚಿಕೆಯನ್ನು ಕಡಿಮೆ ಮಾಡುವುದರ ಕುರಿತು ವಿರೋಧ ಪಕ್ಷದ ಆರೋಪಗಳನ್ನು ಅವರು ನಿರಾಕರಿಸಿದರು. ಈ ವರ್ಷ ೨೫ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಹಣವನ್ನು ರಾಜ್ಯಗಳಿಗೆ ವರ್ಗಾಯಿಸಲಾಗುವುದು ಎಂದ ಅವರು, ಸರ್ಕಾರ ವಿಭಜಿಸಬಹುದಾದ ನಿಧಿಯ ೪೧ ಪ್ರತಿಶತವನ್ನು ರಾಜ್ಯಗಳಿಗೆ ವರ್ಗಾಯಿಸಿದೆ ಮತ್ತು ಯಾವುದೇ ರಾಜ್ಯದ ಪಾಲನ್ನು ಕಡಿಮೆ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು. ಸಾಲದ ಹರಿವಿನ ಕುರಿತು ಮಾತನಾಡಿದ ಸಚಿವರು, ಎಂಎಸ್‌ಎಂಇಗಳು ಸೇರಿದಂತೆ ಕೈಗಾರಿಕೆಗಳಿಗೆ ಹಣದ ಕೊರತೆಯಿಲ್ಲ ಎಂದರು. ಸೆಸ್ ಮತ್ತು ಸರ್‌ಚಾರ್ಜ್‌ಗಳ ಸಂಗ್ರಹಕ್ಕೆ ಸಂಬಂಧಿಸಿದಂತೆ ಆರೋಗ್ಯ ಸೆಸ್, ಶಿಕ್ಷಣ ಸೆಸ್ ಮತ್ತು ರಸ್ತೆ ಸೆಸ್‌ನಂತಹ ನಿರ್ದಿಷ್ಟ ಉದ್ದೇಶಗಳಿಗಾಗಿ ಕೇಂದ್ರ ಸರ್ಕಾರ ಇವುಗಳನ್ನು ಸಂಗ್ರಹಿಸುತ್ತದೆ ಎಂದು ಸಚಿವರು ಪುನರುಚ್ಚರಿಸಿದರು. ಸಂಗ್ರಹಿಸಿದ ಮೊತ್ತವನ್ನು ರಾಜ್ಯಗಳಲ್ಲಿ ಖರ್ಚು ಮಾಡಲಾಗುತ್ತಿದೆ ಎಂದು ತಿಳಿಸಿದರು. ಎನ್‌ಡಿಎ ಸರ್ಕಾರದ ಅವಧಿಯಲ್ಲಿ ಹಣದುಬ್ಬರ ಕಡಿಮೆಯಾಗಿದೆ ಎಂದು ಅವರು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಸರ್ಕಾರ ದೇಶದ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದೆ ಎಂದರು. ಕಾಂಗ್ರೆಸ್ ಸರ್ಕಾರವು ತನ್ನ ಆಡಳಿತದ ಸಮಯದಲ್ಲಿ ರೈತರ ಹಿತಾಸಕ್ತಿಯೊಂದಿಗೆ ರಾಜಿ ಮಾಡಿಕೊಂಡಿದೆ ಎಂದು ಅವರು ಆರೋಪಿಸಿದರು.

<><><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷಗಳು ನೀಡಿರುವ ಅವಿಶ್ವಾಸ ಗೊತ್ತುವಳಿ ಸೂಚನೆಯನ್ನು ಬಜೆಟ್ ಅಧಿವೇಶನದ ಎರಡನೇ ಹಂತದಲ್ಲಿ ಪರಿಗಣಿಸಲಾಗುವುದು. ಬಜೆಟ್ ಅಧಿವೇಶನದ ಎರಡನೇ ಹಂತವು ಮಾರ್ಚ್ ೯ ರಿಂದ ಪ್ರಾರಂಭವಾಗಲಿದ್ದು, ಏಪ್ರಿಲ್ ೨ ರವರೆಗೆ ಮುಂದುವರಿಯಲಿದೆ. ಲೋಕಸಭಾ ಸಚಿವಾಲಯವು ಅವಿಶ್ವಾಸ ಗೊತ್ತುವಳಿಯ ಸೂಚನೆಯಲ್ಲಿ ಕೆಲವು ನ್ಯೂನತೆಗಳನ್ನು

ಗುರುತಿಸಿದೆ. ಲೋಕಸಭೆಯ ಮೂಲಗಳ ಪ್ರಕಾರ, ಕಳೆದ ವರ್ಷ ಫೆಬ್ರವರಿಯಲ್ಲಿ ನಡೆದ ನಾಲ್ಕು ಘಟನೆಗಳ ಬಗ್ಗೆ ವಿರೋಧ ಪಕ್ಷಗಳು ಉಲ್ಲೇಖಗಳನ್ನು ನೀಡಿವೆ ಮತ್ತು ಅದರ ಆಧಾರದ ಮೇಲೆ, ನಿಯಮಗಳ ಅಡಿಯಲ್ಲಿ ನೋಟಿಸ್ ಅನ್ನು ತಿರಸ್ಕರಿಸಬಹುದಿತ್ತು. ಈ ವೇಳೆ, ಸ್ಪೀಕರ್ ಓಂ ಬಿರ್ಲಾ ಅವರು ನೋಟಿಸ್‌ನಲ್ಲಿನ ನ್ಯೂನತೆಗಳನ್ನು ಸರಿಪಡಿಸಲು ಮತ್ತು ಸ್ಥಾಪಿತ ಕಾರ್ಯವಿಧಾನಗಳ ಪ್ರಕಾರ ಮುಂದುವರಿಯಲು ಸಚಿವಾಲಯಕ್ಕೆ ನಿರ್ದೇಶನ ನೀಡಿದ್ದಾರೆ. ಅವರು ನಿಯಮಗಳ ಪ್ರಕಾರ ಈ ವಿಷಯದಲ್ಲಿ ತ್ವರಿತ ಕ್ರಮ ಕೈಗೊಳ್ಳಲು ಆದೇಶಿಸಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನಿನ್ನೆ ರೋಲ್ಸ್ ರಾಯ್ಸ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ತುಫಾನ್ ಎರ್ಜಿನ್‌ಬಿಲ್ಗಿಕ್ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಭಾರತದಲ್ಲಿ ತನ್ನ ಚಟುವಟಿಕೆಗಳನ್ನು ಹೆಚ್ಚಿಸುವ ಮತ್ತು ರಾಷ್ಟ್ರದ ನವೀನ ಮತ್ತು ಕ್ರಿಯಾತ್ಮಕ ಯುವಕರೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ರೋಲ್ಸ್ ರಾಯ್ಸ್‌ನ ಉತ್ಸಾಹವನ್ನು ಭಾರತ ಸ್ವಾಗತಿಸುತ್ತದೆ ಎಂದು ಹೇಳಿದ್ದಾರೆ.

<><><>

ಲೋಕಸಭೆಯಲ್ಲಿ ಬಜೆಟ್ ಮೇಲಿನ ಚರ್ಚೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಆಧಾರರಹಿತ ಹೇಳಿಕೆ ನೀಡುವ ಮೂಲಕ ಸದನವನ್ನು ತಪ್ಪುದಾರಿಗೆಳೆದಿದ್ದು, ಅವರ ವಿರುದ್ಧ ಸರ್ಕಾರ ಹಕ್ಕುಚ್ಯುತಿ ಸೂಚನೆ ಮಂಡಿಸಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರೆನ್ ರಿಜಿಜು ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್‌ಗಾಂಧಿ ಅವರು ಪ್ರಧಾನಮಂತ್ರಿ ನರೇಂದ್ರ ಮೋದಿ ವಿರುದ್ಧ ಅನುಪಯುಕ್ತ ತಪ್ಪು ಆರೋಪ ಮಾಡಿದ್ದಾರೆ ಎಂದು ಹೇಳಿದ್ದಾರೆ. ರಾಹುಲ್‌ಗಾಂಧಿ ಅವರು ಯಾವುದೇ ಸೂಚನೆಯನ್ನು ನೀಡದೇ ಗಂಭೀರವಾದ ಆಪಾದನೆಯನ್ನು ಮಾಡಿದ್ದಾರೆ ಎಂದು ಸಚಿವರು ಆರೋಪಿಸಿದ್ದಾರೆ.

<><><>

೨೦೨೦ ರ ಕೈಗಾರಿಕಾ ಸಂಬಂಧಗಳ ಸಂಹಿತೆಯಿಂದ ಬದಲಾಯಿಸಲಾದ ಕೆಲವು ಕಾನೂನುಗಳ ನಿರಂತರತೆಯ ಕುರಿತು ಭವಿಷ್ಯದಲ್ಲಿ ಯಾವುದೇ ಅನಗತ್ಯ ತೊಡಕುಗಳನ್ನು ತಪ್ಪಿಸಲು, ನಿನ್ನೆ ಲೋಕಸಭೆಯಲ್ಲಿ ತಿದ್ದುಪಡಿ ಮಸೂದೆಯನ್ನು ಪರಿಚಯಿಸಲಾಯಿತು. ಕೈಗಾರಿಕಾ ಸಂಬಂಧಗಳ ಸಂಹಿತೆ ತಿದ್ದುಪಡಿ ಮಸೂದೆ ೨೦೨೬ ಅನ್ನು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ

ಮನ್ಸುಖ್ ಮಾಂಡವಿಯಾ ಶೂನ್ಯ ವೇಳೆಯಲ್ಲಿ ಸದನದಲ್ಲಿ ಪರಿಚಯಿಸಿದರು. ಮಸೂದೆಯ ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆಯ ಪ್ರಕಾರ, ಕೈಗಾರಿಕಾ ಸಂಬಂಧಗಳ ಸಂಹಿತೆ, ೨೦೨೦, ಟ್ರೇಡ್ ಯೂನಿಯನ್ಸ್ ಕಾಯ್ದೆ, ೧೯೨೬, ಕೈಗಾರಿಕಾ ಉದ್ಯೋಗ ಸ್ಥಾಯಿ ಆದೇಶಗಳ ಕಾಯ್ದೆ, ೧೯೪೬ ಮತ್ತು ಕೈಗಾರಿಕಾ ವಿವಾದ ಕಾಯ್ದೆ, ೧೯೪೭ ಅನ್ನು ಬದಲಾಯಿಸುತ್ತದೆ, ಇದು ಕಾರ್ಮಿಕ ಸಂಘಗಳು, ಕೈಗಾರಿಕಾ ಉದ್ಯೋಗ ಮತ್ತು ಕೈಗಾರಿಕಾ ವಿವಾದಗಳಿಗೆ ಸಂಬಂಧಿಸಿದ್ದಾಗಿದೆ.

<><><>

ಬಾಂಗ್ಲಾದೇಶದಲ್ಲಿ ಇಂದು ರಾಷ್ಟ್ರೀಯ ಸಂಸದೀಯ ಚುನಾವಣೆ ನಡೆಯುತ್ತಿದೆ. ಮತದಾನ ೭.೩೦ಕ್ಕೆ ಆರಂಭವಾಗಿದೆ. ೨೯೯ ಮತಕ್ಷೇತ್ರಗಳಲ್ಲಿ ಒಟ್ಟು ೪೨ ಸಾವಿರದ ೭೭೯ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸಂಜೆ ೪.೩೦ರವರೆಗೆ ಸತತವಾಗಿ ಮತದಾನ ನಡೆಯಲು ವ್ಯವಸ್ಥೆ ಮಾಡಲಾಗಿದೆ. ಓರ್ವ ಅಭ್ಯರ್ಥಿಯ ನಿಧನದ ಹಿನ್ನೆಲೆಯಲ್ಲಿ ಶೇರ್‌ಪುರ್-೩ ಕ್ಷೇತ್ರದ ಚುನಾವಣೆಯನ್ನು ಮುಂದಕ್ಕೆ ಹಾಕಲಾಗಿದೆ. ೬ ಕೋಟಿ ೨೮ ಲಕ್ಷ ಮಹಿಳೆಯರು ಸೇರಿದಂತೆ ಒಟ್ಟು ೧೨ ಕೋಟಿ ೭೭ ಲಕ್ಷ ಮತದಾರರು ಮತ ಚಲಾಯಿಸುವ ಹಕ್ಕು ಹೊಂದಿದ್ದಾರೆ ಎಂದು ಬಾಂಗ್ಲಾದೇಶದ ಚುನಾವಣಾ ಆಯೋಗ ತಿಳಿಸಿದೆ. ಕಾನೂನು ಸುವ್ಯವಸ್ಥೆಗಾಗಿ ದೇಶಾದ್ಯಂತ ೯ ಲಕ್ಷ ೫೧ ಸಾವಿರ ಭದ್ರತಾ ಸಿಬ್ಬಂದಿ ನಿಯೋಜಿಸಲಾಗಿದೆ.

<><><>

ನವದೆಹಲಿಯಲ್ಲಿ ನಿನ್ನೆ ಕೇಂದ್ರ ತನಿಖಾ ದಳ -ಸಿಬಿಐ ಮತ್ತು ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರವು ಸೈಬರ್ ವಂಚನೆಗಳನ್ನು ಹಾಗೂ ಅವುಗಳಿಗೆ ಬೆಂಬಲ ನೀಡುವ ವ್ಯವಸ್ಥೆಯನ್ನು ತಡೆಗಟ್ಟುವ ಕುರಿತು ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ನಡೆಸಿತು. ಈ ಸಮ್ಮೇಳನದಲ್ಲಿ ನಿಯಂತ್ರಣಾತ್ಮಕ ಸುಧಾರಣೆಗಳು, ಕೃತಕ ಬುದ್ಧಿಮತ್ತೆಯ ಬಳಕೆ ಹಾಗೂ ಸೈಬರ್ ಅಪರಾಧವನ್ನು ಎದುರಿಸಲು ಜಾಗತಿಕ ಸಹಕಾರದ ಬಗ್ಗೆ ಚರ್ಚೆಗಳು ನಡೆದವು. ಸಮ್ಮೇಳನದಲ್ಲಿ ಉದಯೋನ್ಮುಖ ಸೈಬರ್ ಸವಾಲುಗಳು, ವಂಚಕ ಕಾರ್ಯಾಚರಣೆಗಳನ್ನು ತಡೆಗಟ್ಟುವ ವ್ಯವಸ್ಥೆಗಳು, ಅಂತಾರಾಷ್ಟ್ರೀಯ ಸಹಕಾರ ಮತ್ತು ಪುನರ್ವಸತಿ ಚಟುವಟಿಕೆಗಳ ಅಗತ್ಯತೆ ಕುರಿತು ಚರ್ಚಿಸಲಾಯಿತು ಎಂದು ಸಿಬಿಐ ಪ್ರಕಟಣೆಯಲ್ಲಿ ತಿಳಿಸಿದೆ. ಸೈಬರ್ ವಂಚನೆಗೆ ಸಹಕಾರ ನೀಡುವ

ಸಾಮಾಜಿಕ ಮಾಧ್ಯಮ ವೇದಿಕೆಗಳು, ಸಂದೇಶ ವಿನಿಮಯ ಸೇವೆಗಳು ಹಾಗೂ ಡಿಜಿಟಲ್ ಮಧ್ಯವರ್ತಿಗಳ ಪಾತ್ರವನ್ನೂ ಪರಿಶೀಲಿಸಲಾಯಿತು.

<><><>

ಕೇಂದ್ರ ಪ್ರೌಢ ಶಿಕ್ಷಣ ಮಂಡಳಿ-ಸಿಬಿಎಸ್ಇ ಈ ವರ್ಷದಿಂದ ೧೨ನೇ ತರಗತಿಯ ಉತ್ತರಪತ್ರಿಕೆಗಳ ಮೌಲ್ಯಮಾಪನಕ್ಕಾಗಿ ಆನ್-ಸ್ಕ್ರೀನ್ ಮಾರ್ಕಿಂಗ್-ಓಎಸ್ಎಂ ಪದ್ಧತಿಯನ್ನು ಜಾರಿಗೆ ತರಲಿದೆ. ಆದರೆ ೧೦ನೇ ತರಗತಿಯ ಉತ್ತರಪತ್ರಿಕೆಗಳ ಮೌಲ್ಯಮಾಪನವು ಹಿಂದಿನಂತೆ ಭೌತಿಕ ವಿಧಾನದಲ್ಲೇ ಮುಂದುವರಿಯಲಿದೆ. ಸಿಬಿಎಸ್ಇ ಪರೀಕ್ಷಾ ನಿಯಂತ್ರಕ ಸಂಯಂ ಭಾರದ್ವಾಜ್, ಕಾರ್ಯಕ್ಷಮತೆ ಮತ್ತು ಪಾರದರ್ಶಕತೆಯನ್ನು ಹೆಚ್ಚಿಸುವ ನಿರಂತರ ಪ್ರಯತ್ನದ ಭಾಗವಾಗಿ, ಈ ವರ್ಷದ ಪರೀಕ್ಷೆಯಿಂದ ೧೨ನೇ ತರಗತಿಯ ಉತ್ತರಪತ್ರಿಕೆಗಳ ಮೌಲ್ಯಮಾಪನಕ್ಕೆ ಆನ್-ಸ್ಕ್ರೀನ್ ಮಾರ್ಕಿಂಗ್ ಅನ್ನು ಪರಿಚಯಿಸಲು ಮಂಡಳಿ ತೀರ್ಮಾನಿಸಿದೆ ಎಂದು ತಿಳಿಸಿದ್ದಾರೆ. ಈ ಕ್ರಮದಿಂದ ಅಂಕಗಳನ್ನು ನೀಡುವಲ್ಲಿ ಉಂಟಾಗುವ ಮಾನವ ಸಹಜ ದೋಷಗಳ ನಿವಾರಣೆ ಸಾಧ್ಯವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸಿಬಿಎಸ್ಇ ಪ್ರತಿವರ್ಷ ಭಾರತದಲ್ಲಿ ಹಾಗೂ ೨೬ ದೇಶಗಳಲ್ಲಿ ೧೦ನೇ ಮತ್ತು ೧೨ನೇ ತರಗತಿ ಮಂಡಳಿ ಪರೀಕ್ಷೆಗಳನ್ನು ನಡೆಸುತ್ತದೆ. ಇದರಿಂದ ಸುಮಾರು ೪೬ ಲಕ್ಷ ವಿದ್ಯಾರ್ಥಿಗಳು ಪ್ರಯೋಜನ ಪಡೆಯುತ್ತಾರೆ.

<><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಸಿಸಿ ಪುರುಷರ ಟಿ-೨೦ ಕ್ರಿಕೆಟ್ ವಿಶ್ವಕಪ್‌ನ ಸಿ ಗುಂಪಿನ ಪಂದ್ಯದಲ್ಲಿ ವೆಸ್ಟ್ ಇಂಡೀಸ್ ತಂಡ ಇಂಗ್ಲೆಂಡ್ ತಂಡವನ್ನು ೩೦ ರನ್‌ಗಳಿಂದ ಮಣಿಸಿತು. ಮೊದಲು ಬ್ಯಾಟ್ ಮಾಡಿದ ವೆಸ್ಟ್ ಇಂಡೀಸ್ ತಂಡವು ಶೆರ್ಫೇನ್ ರುದರ್ಫೋರ್ಡ್ ಅವರ ೭೬ ಅಜೇಯ ರನ್‌ಗಳ ನೆರವಿನಿಂದ ೨೦ ಓವರ್‌ಗಳಲ್ಲಿ ೬ ವಿಕೆಟ್‌ಗಳಿಗೆ ೧೯೬ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಇಂಗ್ಲೆಂಡ್ ೧೯ ಓವರ್‌ಗಳಲ್ಲಿ ೧೬೬ ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡು ಸೊಲೊಪ್ಪಿಕೊಂಡಿತು. ನಿನ್ನೆ ಕೊಲಂಬೊದಲ್ಲಿ ನಡೆದ ಬಿ ಗುಂಪಿನ ಪಂದ್ಯದಲ್ಲಿ ಆಸ್ಟ್ರೇಲಿಯಾ, ಐರ್ಲೆಂಡ್ ಅನ್ನು ೬೭ ರನ್‌ಗಳಿಂದ ಸೋಲಿಸಿತು. ಮೊದಲು ಬ್ಯಾಟಿಂಗ್ ಮಾಡಿದ ಆಸ್ಟ್ರೇಲಿಯಾ ೨೦ ಓವರ್‌ಗಳಲ್ಲಿ ೬ ವಿಕೆಟ್‌ಗೆ ೧೮೨ ರನ್ ಗಳಿಸಿತು. ನಂತರ ಐರ್ಲೆಂಡ್ ೧೬.೫ ಓವರ್‌ಗಳಲ್ಲಿ ೧೧೫ ರನ್‌ಗಳಿಗೆ ತನ್ನೆಲ್ಲ ವಿಕೆಟ್ ಕಳೆದುಕೊಂಡಿತು. ಇದಕ್ಕೂ

ಮುನ್ನ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ ಎರಡು ಸೂಪರ್ ಓವರ್‌ಗಳ ನಡುವೆ ದಕ್ಷಿಣ ಆಫ್ರಿಕಾ ಅಫ್ಘಾನಿಸ್ತಾನವನ್ನು ಸೋಲಿಸಿತು.

<><><><>

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಶ್ವೇತಭವನದಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾದರು. ಸಭೆ ಸುಮಾರು ಮೂರು ಗಂಟೆಗಳ ಕಾಲ ನಡೆಯಿತು. ಸಭೆ ಬಳಿಕ, ಬೆಂಜಮಿನ್ ನೆತನ್ಯಾಹು ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ. ಆದಾಗ್ಯೂ, ಅಧ್ಯಕ್ಷ ಡೋನಾಲ್ಡ್ ಟ್ರಂಪ್, ಟ್ರೂತ್ ಸೋಶಿಯಲ್‌ನಲ್ಲಿನ ಪೋಸ್ಟ್‌ನಲ್ಲಿ ಸಭೆಯನ್ನು ಸಭೆ ಉತ್ತಮವಾಗಿ ನಡೆಯಿತು. ಆದರೆ ಯಾವುದೇ ನಿರ್ಣಾಯಕ ಫಲಿತಾಂಶವನ್ನು ತಲುಪಲಾಗಿಲ್ಲ ಎಂದು ಹೇಳಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>